ಶ್ರೀ ರೇವೂ ನಾಯಕ ಬೆಳಮಗಿ (ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು)

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಗ್ರಂಥಾಲಯ ಮತ್ತು ಸಂಚಾರಿ ಗ್ರಂಥಾಲಯದ ಬಗ್ಗೆ

111 (231): ಶ್ರೀ ಪ್ರಿಯ ಕೃಷ್ಣ (ಗೋವಿಂದರಾಜನಗರ ಕ್ಷೇತ್ರ): ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ರಾಜ್ಯದಲ್ಲಿ ಗ್ರಂಥಾಲಯ ಮತ್ತು ಸಂಚಾರಿ ಗ್ರಂಥಾಲಯಗಳ ಸಂಖ್ಯೆ ಎಷ್ಟು? ಅವುಗಳ ಪೈಕಿ ಇಲಾಖೆಯ ಸ್ವಂತ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು;

ಆ) ಗ್ರಂಥಾಲಯ ಮತ್ತು ಸಂಚಾರಿ ಗ್ರಂಥಾಲಯಗಳ ಸಂಖ್ಯೆಯನ್ನು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಇ) ಹಾಗಿದ್ದಲ್ಲಿ, ಗೋವಿಂದರಾಜ ನಗರ ಕ್ಷೇತ್ರದಲ್ಲಿ ಗ್ರಂಥಾಲಯ ಹಾಗೂ ಸಂಚಾರಿ ಗ್ರಂಥಾಲಯಗಳು ಅವಶ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಎಷ್ಟು ಗ್ರಂಥಾಲಯ ಹಾಗೂ ಸಂಚಾರಿ ಗ್ರಂಥಾಲಯ ಮಂಜೂರು ಮಾಡಲಾಗಿದೆ; (ವಿವರ ತಿಳಿಸುವುದು);

ಶ್ರೀ ರೇವೂ ನಾಯಕ ಬೆಳಮಗಿ (ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು):

ಅ) ರಾಜ್ಯದಲ್ಲಿ ಗ್ರಂಥಾಲಯಗಳು 6,663. ಸಂಚಾರಿ ಗ್ರಂಥಾಲಯ ಗಳು 15, ಸ್ವಂತ ಕಟ್ಟಡ ಹೊಂದಿರುವ ಗ್ರಂಥಾಲಯಗಳು 200.

ಆ) ಇಲ್ಲ.

ಇ) ಗಮನಕ್ಕೆ ಬಂದಿರುವುದಿಲ್ಲ. ಆದಾಗ್ಯೂ ಈಗಾಗಲೇ ಉಪ ನಿರ್ದೇಶಕರ ಕಛೇರಿ, ನಗರ ಕೇಂದ್ರ ಗ್ರಂಥಾಲಯ, ಪಶ್ಚಿಮ ವಲಯ,

ಬೆಂಗಳೂರು ಮುಖಾಂತರ ಗೋವಿಂದರಾಜ ನಗರ ಕ್ಷೇತ್ರದಲ್ಲಿ ಶಾಖಾ ಗ್ರಂಥಾಲಯ ಹಾಗೂ ಸಂಚಾರಿ ಗ್ರಂಥಾಲಯ ಸೇವೆಯನ್ನು ಒದಗಿಸಲಾಗಿದೆ.

ಕಾಲೇಜು ಕಟ್ಟಡ ನಿರ್ಮಾಣದ ಬಗ್ಗೆ

113 (224): ಶ್ರೀ ರಮೇಶ ಬಂಡಿ ಸಿದ್ದೇಗೌಡ ಎ.ಬಿ. (ಶ್ರೀರಂಗಪಟ್ಟಣ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ವಿಧಾನ ಸಭಾ ಕ್ಷೇತ್ರದ ಕೆ.ಆರ್. ಎಸ್. ಪ್ರಥಮ ದರ್ಜೆ ಕಾಲೇಜುಗಳ ಕಟ್ಟಡ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸುವುದಕ್ಕೆ ಈವರೆವಿಗೂ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಸಾಲಿನ ಯೋಜನೆಯಲ್ಲಿಯಾದರೂ ಕಾಮಗಾರಿಗೆ ಹಣ ಬಿಡುಗಡೆ ಮಾಡಲಾಗುವುದೇ; ಸನ್ಮಾನ್ಯ ಮುಖ್ಯಮಂತ್ರಿಗಳು 4029 ಲೆಕ್ಕ ಶೀರ್ಷಿಕೆಯಡಿಯಲ್ಲಿ ಹಣ ಬಿಡುಗಡೆ ಮಾಡುವಂತೆ ಸೂಚಿಸಿದರೂ ಸರ್ಕಾರ ಕ್ರಮ ಕೈಗೊಂಡಿರುವುದಿಲ್ಲವೇಕೆ (ಪೂರ್ಣ ವಿವರ ನೀಡುವುದು);

ಇ) ಸರ್ಕಾರ ಎಷ್ಟು ಕಾಲೇಜುಗಳನ್ನು ಮಂಜೂರು ಮಾಡಿರುತ್ತದೆ. (ಪೂರ್ಣ ಮಾಹಿತಿ ನೀಡುವುದು) ಈವರೆವಿಗೂ ಕಟ್ಟಡ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡಿಲ್ಲದಿರುವ ಬಗ್ಗೆ ಮಾಹಿತಿ ನೀಡುವುದು?

ಶ್ರೀ ವಿ.ಎಸ್.ಆಚಾರ್ಯ (ಉನ್ನತ ಶಿಕ್ಷಣ ಸಚಿವರು):

ಅ) ಬಂದಿದೆ.

ಆ) ನಿವೇಶನ ಲಭ್ಯವಾದ ನಂತರ ಅನುದಾನದ ಲಭ್ಯತೆಯನ್ನಾಧರಿಸಿ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಇ) 191(ವಿವರ ಅನುಬಂಧದಲ್ಲಿ ಲಗತ್ತಿಸಿದೆ) ನಿವೇಶನ ಲಭ್ಯವಿರುವ ಎಲ್ಲಾ ಪದವಿ ಕಾಲೇಜುಗಳ ಕಟ್ಟಡ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡಲಾಗಿದೆ.